# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 296-ಎ ಯಡಿಯಲ್ಲಿ ಜಿಲ್ಲಾ ಪಂಚಾಯತ್ ಕುಂದು ಕೊರತೆ ನಿವಾರಣಾ ಪ್ರಾಧಿಕಾರಗಳ ಹುದ್ದೆಗಳ ಮಂಜೂರಾತಿ ಬಗ್ಗೆ.

**ಪ್ರಸ್ತಾವನೆ:**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 296 ರಡಿಯಲ್ಲಿ ಪ್ರತಿ ಜಿಲ್ಲೆಯಲ್ಲಿಯೂ ಕುಂದು ಕೊರತೆ ನಿವಾರಣಾ ಪ್ರಾಧಿಕಾರವನ್ನು ರಚಿಸಲು ಉಪಬಂಧ ಕಲ್ಪಿಸಲಾಗಿದೆ. ಅದರಂತೆ ಈ ಕುಂದು ಕೊರತೆ ನಿವಾರಣೆ ಪ್ರಾಧಿಕಾರಗಳು ಪಂಚಾಯತ್ ರಾಜ್ ಸಂಸ್ಥೆಗಳು ನಿರ್ವಹಿಸಬೇಕಾದ ಕರ್ತವ್ಯಗಳನ್ನು ನಿರ್ವಹಿಸದಿದ್ದ ಸಂದರ್ಭದಲ್ಲಿ ಬಾಧಿತರಾದ ವ್ಯಕ್ತಿಗಳು ಸಲ್ಲಿಸುವ ದೂರುಗಳು ಮತ್ತು ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ನಿಯಮಾನುಸಾರ ಪರಿಶೀಲಿಸಿ, ದೂರುಗಳನ್ನು ಇತ್ಯರ್ಥಪಡಿಸಲು ಕ್ರಮ ಕೈಗೊಳ್ಳಬೇಕಾಗಿರುತ್ತದೆ. ಆದ್ದರಿಂದ ಸರ್ಕಾರವು ಪ್ರತಿ ಜಿಲ್ಲೆಯಲ್ಲೂ ನಿವೃತ್ತ ಜಿಲ್ಲಾ ನ್ಯಾಯಾಧೀಶ ಅಥವಾ ನಿವೃತ್ತ ವಿಶೇಷ ಜಿಲ್ಲಾಧಿಕಾರಿ ಹುದ್ದೆಗೆ ಕಡಿಮೆ ಇಲ್ಲದ ದರ್ಜೆಯ ಅಧಿಕಾರಿಯನ್ನು ಕುಂದು ಕೊರತೆ ನಿವಾರಣಾ ಪ್ರಾಧಿಕಾರಿಯಾಗಿ ನೇಮಿಸುವ ಪೂರ್ವದಲ್ಲಿ ಒಂದು ವರ್ಷ ಪ್ರಾಯೋಗಿಕವಾಗಿ ಬೆಂಗಳೂರು(ನಗರ), ಬೆಳಗಾವಿ, ಕಲಬುರಗಿ ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಕುಂದು ಕೊರತೆ ನಿವಾರಣಾ ಪ್ರಾಧಿಕಾರವನ್ನು ಅವಶ್ಯಕ ಸಿಬ್ಬಂದಿಯೊಂದಿಗೆ ರಚಿಸಲು ನಿರ್ಧರಿಸಿದೆ.

ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 749 ಗ್ರಾಪಂಅ 2016, ಬೆಂಗಳೂರು, ದಿನಾಂಕ:12-04-2017.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 296-ಎ ರಡಿಯಲ್ಲಿ ಪ್ರದತ್ತವಾದ ಅಧಿಕಾರದನ್ವಯ ಪ್ರಾಯೋಗಿಕವಾಗಿ ಬೆಂಗಳೂರು (ನಗರ), ಬೆಳಗಾವಿ, ಕಲಬುರಗಿ ಮತ್ತು ಚಿಕ್ಕಮಗಳೂರು ಈ ನಾಲ್ಕು ಜಿಲ್ಲೆಗಳಲ್ಲಿ ಕುಂದು ಕೊರತೆ ನಿವಾರಣಾ ಪ್ರಾಧಿಕಾರವನ್ನು ಪೂರಕ ಸಿಬ್ಬಂದಿಯೊಂದಿಗೆ ಮತ್ತು ನೇಮಕಾತಿ ವಿಧಾನವನ್ನು ಈ ಕೆಳಕಂಡಂತೆ ನಿಗಧಿಪಡಿಸಿ ಆದೇಶಿಸಿದೆ.

| ಕ್ರ ಸಂ | ಹುದ್ದೆಗಳ ಪದನಾಮ | ಹುದ್ದೆಗಳ ಸಂಖ್ಯೆ | ವೇತನ | ನೇಮಕಾತಿ ವಿಧಾನ |
|---|---|---|---|---|
| 1 | ಕುಂದು ಕೊರತೆ ನಿವಾರಣಾ ಪ್ರಾಧಿಕಾರಿ | 01 | ಮಾಸಿಕ ನಿವೃತ್ತಿ ವೇತನವನ್ನು ಕಳೆದ ನಂತರ ಸೇವೆಯ ಕೊನೆಯಲ್ಲಿ ಪಡೆದ ಅಂತಿಮ ವೇತನ ಮತ್ತು ಮಾಸಿಕ ರೂ. 3000 ಆತಿಥ್ಯ ಭತ್ಯೆ | ನಿವೃತ್ತ ನ್ಯಾಯಾಧೀಶರು/ ವಿಶೇಷ ಜಿಲ್ಲಾಧಿಕಾರಿಗಳ ದರ್ಜೆಗಿಂತ ಕಡಿಮೆಯಿಲ್ಲದ ಅಧಿಕಾರಿಯ ನೇರ ನೇಮಕಾತಿ ಮೂಲಕ |
| 2 | ವಾಹನ ಸೌಲಭ್ಯ (ವಾಹನ ಮತ್ತು ಚಾಲಕ ಸೇರಿ) | 01 | ರೂ. 30,000 | ಹೊರ ಗುತ್ತಿಗೆಯ ಆಧಾರದ ಮೇಲೆ |
| 3 | ಶೀಘ್ರಲಿಪಿಗಾರರು (ನಿಯೋಜನೆ) | 01 | ಸರ್ಕಾರದ ವೇತನ ಶ್ರೇಣಿ | ತತ್ಸಮಾನ ಹುದ್ದೆಯಿಂದ ನಿಯೋಜನೆ |
| 4 | ಪ್ರಥಮ ದರ್ಜೆ ಸಹಾಯಕರು (ನಿಯೋಜನೆ) | 01 | ಸರ್ಕಾರದ ವೇತನ ಶ್ರೇಣಿ | ತತ್ಸಮಾನ ಹುದ್ದೆಯಿಂದ ನಿಯೋಜನೆ |
| 5 | ಡಾಟಾ ಎಂಟ್ರಿ ಆಪರೇಟರ್ | 01 | ಗರಿಷ್ಠ ಮಾಸಿಕ ರೂ. 20,000 | ಹೊರ ಗುತ್ತಿಗೆಯ ಆಧಾರದ ಮೇಲೆ |
| 6 | ಗ್ರೂಪ್ "ಡಿ" | 01 | ಮಾಸಿಕ ರೂ. 12000 | ಹೊರ ಗುತ್ತಿಗೆಯ ಆಧಾರದ ಮೇಲೆ |

2. ಮೇಲ್ಕಂಡ ಕುಂದು ಕೊರತೆ ನಿವಾರಣಾ ಪ್ರಾಧಿಕಾರವು ಆಯಾ ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ದೂರುಗಳು, ಕುಂದು ಕೊರತೆಗಳ ಬಗ್ಗೆ ನಿಯಮಾನುಸಾರ ಪರಿಶೀಲಿಸಿ ವಿಲೇವಾರಿ ಮಾಡಲು (ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಅಧಿನಿಯಮದಡಿ ಸ್ಥಾಪನೆಯಾಗಿರುವ ಒಂಬಡ್ಸ್‌ಮನ್ ಅಧಿಕಾರ ವ್ಯಾಪ್ತಿ ಹೊರತುಪಡಿಸಿ) ಅಧಿಕಾರ ಹೊಂದಿರುತ್ತದೆ.

3. ಮೇಲ್ಕಂಡ ಪ್ರಾಧಿಕಾರಕ್ಕೆ ಜಿಲ್ಲಾ ಪಂಚಾಯತ್ ಕಟ್ಟಡಗಳಲ್ಲಿ ಕಾರ್ಯಾಲಯಕ್ಕೆ ಸೂಕ್ತ ಸ್ಥಳಾವಕಾಶ ಕಲ್ಪಿಸತಕ್ಕದ್ದು ಮತ್ತು ಅಗತ್ಯ ಕಛೇರಿ ಪೀಠೋಪಕರಣಗಳನ್ನು ಮತ್ತು ಲೇಖನ ಸಾಮಾಗ್ರಿಯನ್ನು ಒದಗಿಸತಕ್ಕದ್ದು.

4. ಈ ಕುಂದು ಕೊರತೆ ನಿವಾರಣಾ ಪ್ರಾಧಿಕಾರದ ರಚನೆಯಿಂದ ಉಂಟಾಗುವ ವೆಚ್ಚವನ್ನು ಲೆಕ್ಕ ಶೀರ್ಷಿಕೆ ಸಂಖ್ಯೆ:2515-00-101-0-09 ಕೆಪಿಆರ್ 103 (GIA-General) ರಡಿಯಲ್ಲಿ ಭರಿಸತಕ್ಕದ್ದು.

5. ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಎಫ್‌ಡಿ 386 ವೆಚ್ಚ-6/2016, ದಿನಾಂಕ: 02-02-2017 ರಲ್ಲಿ ನೀಡಲಾದ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ ವೃತ್ತ, ಪಾರ್ಕ್ ಹೌಸ್ ರಸ್ತೆ, ಬೆಂಗಳೂರು.
2. ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ, ಬೆಳಗಾವಿ, ಕಲಬುರಗಿ ಮತ್ತು ಚಿಕ್ಕಮಗಳೂರು
3. ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ಬೆಂಗಳೂರು ನಗರ, ಬೆಳಗಾವಿ, ಕಲಬುರಗಿ ಮತ್ತು ಚಿಕ್ಕಮಗಳೂರು.
4. ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕಾಧಿಕಾರಿಗಳು, ಬೆಂಗಳೂರು ನಗರ, ಬೆಳಗಾವಿ, ಕಲಬುರಗಿ ಮತ್ತು ಚಿಕ್ಕಮಗಳೂರು, ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಎಲ್ಲಾ ತಾಲ್ಲೂಕು ಪಂಚಾಯತಿಗಳು.
5. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಬೆಂಗಳೂರು ನಗರ, ಬೆಳಗಾವಿ, ಕಲಬುರಗಿ ಮತ್ತು ಚಿಕ್ಕಮಗಳೂರು, ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಎಲ್ಲಾ ಗ್ರಾಮ ಪಂಚಾಯತಿಗಳು (ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕಾಧಿಕಾರಿಗಳ ಮುಖಾಂತರ)

**ಪ್ರತಿಗಳು:**

1. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ,- ಈ ಆದೇಶವನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ 100 ಪ್ರತಿಗಳನ್ನು ಸರ್ಕಾರಕ್ಕೆ ಸಲ್ಲಿಸಲು ಕೋರಿದೆ.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ.
3. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಜಿ.ಪಂ.), ವಿಧಾನಸೌಧ, ಬೆಂಗಳೂರು.
4. ನಿರ್ದೇಶಕರು(ಪಂ.ರಾಜ್-1) ಮತ್ತು ನಿರ್ದೇಶಕರು(ಪಂ.ರಾಜ್-2), ಗ್ರಾಅಪ ಇಲಾಖೆ,
5. ಸರ್ಕಾರದ ಅಧೀನ ಕಾರ್ಯದರ್ಶಿ, (ಸೇವೆಗಳು-ಎ, ಬಿ ಮತ್ತು ಸಿ), ಗ್ರಾಅಪ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾಅಪ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
7. ಇ-ಆಡಳಿತ ವಿಭಾಗ, ಗ್ರಾಅಪ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
8. ಸಂಪಾದಕರು, ಕರ್ನಾಟಕ ವಿಕಾಸ, ಬೆಂಗಳೂರು, ರವರ ಮಾಹಿತಿಗಾಗಿ ಹಾಗೂ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು.
9. ಹೆಚ್ಚುವರಿ ಪ್ರತಿ/ ಶಾಖಾ ರಕ್ಷಕ ಕಡತ.